

ಅರುಣ ಪಿ. ಭಟ್ಟ



## ವಾರಭವಿಷ್ಯ: 16.01.2020ರಿಂದ 22.01.2020




ಕುಟುಂಬ ಬಗ್ಗೆ ಹೆಮ್ಮೆ ಪಡುವಂತಹ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ.

ಶುಭದಿನ 18. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಶುಭ ಕಾರ್ಯವನ್ನು ಆಯೋಜಿಸುವ ಸಾಧ್ಯತೆ ಇದೆ. ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಕೆಲಸಗಳಲ್ಲಿ ಯಶಸ್ಸು ಕಾಣಬಹುದು. . ನಿಮ್ಮ ಪೋಷಕರ ಸಂತೋಷಕ್ಕೆ ನೀವು ಕಾರಣರಾಗುತ್ತೀರಿ.

ಶುಭದಿನ 19. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರೋಗ್ಯ ಸುಧಾರಿಸುವುದು. ಆಕಸ್ಮಿಕ ಖರ್ಚು ಸಂಭವ. ಆಸ್ತಿ ಖರೀದಿ ಬಗ್ಗೆ ಚಿಂತನೆ. ಕಲಾವಿದರಿಗೆ ಸಾಹಿತಿಗಳಿಗೆ ಉತ್ತಮ ವಾರ ರಾಜಕೀಯದ ಅವಕಾಶ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ.

ಶುಭದಿನ 21. ಚಂಡಿ ಪಾರಾಯಣ ಮಾಡಿರಿ.




ಧರ್ಮ ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ ಹಳೆಯ ಮಿತ್ರರ ಆಗಮನ. ಹಲವು ದಿನಗಳ ಸಮಸ್ಯೆ ಬಗೆಹರಿಯುವುದು. ಹೊಟ್ಟೆನೋವಿನ ಕಾಟ. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ.

ಶುಭದಿನ 20. ಶಿವ ಕವಚ ಓದಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ವ್ಯಯ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ವಿರೋಧಿ ಪಾಳಯದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ.

ಶುಭದಿನ 22. ಸೌಂದರ್ಯಲಹರಿ ಪಠಿಸಿರಿ.




ನಿಮ್ಮಲ್ಲಿ ಆಗುತ್ತಿರುವ ಸಕಾರಾತ್ಮಕ ಪರಿಣಾಮ ಅನುಭವಕ್ಕೆ ಬರುತ್ತದೆ. ಸಂಗಾತಿ ಜತೆಗೆ ಇದನ್ನು ಹಂಚಿಕೊಳ್ಳುತ್ತೀರಿ. ಸಂತಸದ ವಾತಾವರಣ ಇರುತ್ತದೆ. ಈವರೆಗಿನ ನಿಮ್ಮ ಆದಾಯ ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ.

ಶುಭದಿನ 23. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಪ್ರಗತಿ ಮತ್ತಷ್ಟು ವೇಗ ಪಡೆದುಕೊಳ್ಳುತ್ತದೆ.

ಶುಭದಿನ 21. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.




ಕೆಲವು ವಿಚಾರಗಳು ಕಣ್ತಪ್ಪಿನಿಂದ ಬಿಟ್ಟು ಹೋಗುವ ಸಾಧ್ಯತೆ ಇದೆ. ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ.

ಶುಭದಿನ 22. ಶ್ರೀ ದುರ್ಗಾಪಾರಾಯಣ ಮಾಡಿರಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತೀರಿ. ದೊಡ್ಡ ಪ್ರಮಾದಗಳನ್ನು ತಡೆಯುವಂತೆ ಸನ್ನಿವೇಶಗಳು ನಿಮಗೆ ಪೂರಕ ಆಗಲಿದೆ. ಆದರೆ ಈ ಸಮಯದಲ್ಲಿ ಆರೋಗ್ಯ ಸ್ಥಿತಿ ಪೂರಕವಾಗಿಲ್ಲ. ಸಂಬಂಧದಲ್ಲಿ ಕೆಲವು ಕಹಿ ಬೆಳವಣಿಗೆಗಳು ಆಗಲಿವೆ.

ಶುಭದಿನ 17. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲೇ ವ್ಯಾಪಾರದಲ್ಲಿ ಪ್ರಗತಿ. ಆರೋಗ್ಯದಲ್ಲಿ ಯಾವುದೇ ಮುಖ್ಯ ಸಮಸ್ಯೆ ಕಾಡುವುದಿಲ್ಲ. ಮನೆಗೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲು ಮನಸು ನಿರ್ಧರಿಸುತ್ತದೆ. ಜೀವನ ಸಂತೋಷದಾಯಕವಾಗಿ ಇರುತ್ತದೆ.

ಶುಭದಿನ 16. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಆ ನಂತರ ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ವ್ಯಾಪಾರ ಮಾಡುವವರಿಗೆ ಲಾಭ ಪಡೆಯಲು ಅವಕಾಶಗಳಿವೆ.

ಶುಭದಿನ 18. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಯಶಸ್ಸು. ದೇವತಾ ಆರಾಧನೆಗೆ ಶ್ರಮ ಹಾಕುತ್ತೀರಿ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ಆರೋಗ್ಯದಲ್ಲಿ ಚೇತರಿಕೆ ಕಾಣಿಸಿಕೊಳ್ಳುತ್ತದೆ.

ಶುಭದಿನ 18. ಕನಕಧಾರಾ ಸ್ತೋತ್ರ ಪಠಣಮಾಡಿರಿ.


